## ಕರ್ನಾಟಕ ಸರ್ಕಾರ

ಇ-ಕಛೇರಿ ಸಂ: ಇಡಿ 64 ಯುಬಿವಿ 2019

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:15.10.2019

**ಇಂದ**

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು

**ಇವರಿಗೆ**

ಕುಲಸಚಿವರು,
ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು.

ಮಾನ್ಯರೇ,

ವಿಷಯ: ಬೆಂಗಳೂರು [illegible] ವಿಶ್ವವಿದ್ಯಾಲಯದ ಪ್ರಾದೇಶಿಕ ಅಧಿಕಾರ ವ್ಯಾಪ್ತಿಗೊಳಪಡುವ ಶ್ರೀ ಸಿದ್ದಗಂಗಾ ಪ್ರಥಮ ದರ್ಜೆ ಕಲಾ ಮತ್ತು ವಾಣಿಜ್ಯ ಕಾಲೇಜಿನ ವಿವಿಧ ಕೋರ್ಸುಗಳಿಗೆ 2019-20ನೇ ಸಾಲಿನಿಂದ ಶಾಶ್ವತ ಸಂಯೋಜನೆ ನವೀಕರಣ ಮಂಜೂರು ಮಾಡುವ ಬಗ್ಗೆ.

ಉಲ್ಲೇಖ:- 1 ತಮ್ಮ ಪತ್ರಸಂಖ್ಯೆ:ಎಸಿಎ-3/ಎ3/ಶಾ.ಸಂ.ಪ್ರ/2019-20, ದಿ:24.04.2019

*****

ಬೆಂಗಳೂರು ವಿಶ್ವವಿದ್ಯಾಲಯದ ಪ್ರಾದೇಶಿಕ ಅಧಿಕಾರ ವ್ಯಾಪ್ತಿಗೊಳಪಡುವ, ಶ್ರೀ ಸಿದ್ದಗಂಗಾ ಪ್ರಥಮ ದರ್ಜೆ ಕಲಾ ಮತ್ತು ವಾಣಿಜ್ಯ ಕಾಲೇಜು, ನೆಲಮಂಗಲ-562 123, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿ ಅಸ್ತಿತ್ವದಲ್ಲಿರುವ ವಿವಿಧ [illegible] ಪದವಿ ವ್ಯಾಸಂಗ ಕ್ರಮಗಳ ಸಂಬಂಧದಲ್ಲಿ 2019-20ನೇ ಸಾಲಿನಿಂದ ಶಾಶ್ವತ ಸಂಯೋಜನೆ ನವೀಕರಣವನ್ನು ಮಂಜೂರು ಮಾಡುವ ಬಗ್ಗೆ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000 ಪ್ರಕರಣ 59ರಲ್ಲಿ ಗೊತ್ತುಪಡಿಸಲಾದ ಪ್ರಕ್ರಿಯೆ ಜರುಗಿಸಿದ ತರುವಾಯ ಪೂರ್ವೋಕ್ತ ಅಧಿನಿಯಮದ ಪ್ರಕರಣ 62(1) ಜೊತೆಯಲ್ಲಿ ಓದಲಾದ ಪ್ರಕರಣ 59(11)ರನ್ವಯ ಅವಶ್ಯಕವಾದ ಸರ್ಕಾರದ ಶಿಫಾರಸ್ಸನ್ನು ಕೋರಿ ಕಾಲೇಜಿನ ಅರ್ಜಿ, ಸ್ಥಳೀಯ ವಿಚಾರಣೆ ಸಮಿತಿಯು ವರದಿ ಸ್ಥಳೀಯ ವಿಚಾರಣೆ ಸಮಿತಿಯ ವರದಿ ಹಾಗೂ ಸಿಂಡಿಕೇಟ್/ವಿದ್ಯಾವಿಷಯಕ ಪರಿಷತ್ತುಗಳ ಗೊತ್ತುವಳಿಗಳ ದಾಖಲೆಗಳೊಂದಿಗೆ ಉಲ್ಲೇಖಿತ ಪತ್ರದನ್ವಯ ಸಲ್ಲಿಸಲಾದ ಪ್ರಸ್ತಾವನೆಯನ್ನು ಕೂಲಕಂಷವಾಗಿ ಸಂವೀಕ್ಷಿಸಲಾಗಿದೆ.

ಸ್ಥಳೀಯ ವಿಚಾರಣೆ ಸಮಿತಿಯ ಅವಲೋಕನೆ ಮತ್ತು ತೀರ್ಮಾನಗಳನ್ನು ಪರಿಗಣಿಸಿದ ತರುವಾಯ ಬೆಂಗಳೂರು ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ ಹಾಗೂ ಸಿಂಡಿಕೇಟ್ ಪ್ರಾಧಿಕಾರಗಳು ಅಂಗೀಕರಿಸಿದ ಗೊತ್ತುವಳಿಗಳನ್ನು ಅನುಸರಿಸಿ,

16/10/19
SREE SIDDAGANGA ARTS & COMMERCE COLLEGE
No 49/2019-20
Date 16.10.2019
NELAMANGALA.

ಶ್ರೀ ಸಿದ್ದಗಂಗಾ ಪ್ರಥಮ ದರ್ಜೆ ಕಲಾ ಮತ್ತು ವಾಣಿಜ್ಯ ಕಾಲೇಜು, ನೆಲಮಂಗಲ-562 123, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿ ಅಸ್ತಿತ್ವದಲ್ಲಿರುವ ಈ ಕೆಳಕಂಡ ವ್ಯಾಸಂಗಕ್ರಮಗಳ ಶಾಶ್ವತ ಸಂಯೋಜನೆಯನ್ನು 2019-20ನೇ ಸಾಲಿನಿಂದ 4 ವರ್ಷಗಳ ಅವಧಿಗೆ ನವೀಕರಿಸಲು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ-2000ರ ಪ್ರಕರಣ 62(1) ಜೊತೆಯಲ್ಲಿ ಓದಲಾದ ಪ್ರಕರಣ 59(11)ರನ್ವಯ ಶಿಫಾರಸ್ಸು ಮಾಡಲಾಗಿದೆ ಎಂದು ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

| ಕ್ರ.ಸಂ. | ವ್ಯಾಸಂಗಕ್ರಮ | ವಿಷಯ ಸಮೂಹ | ವಿದ್ಯಾರ್ಥಿ ಪ್ರಮಾಣ |
|---|---|---|---|
| 1 | ಬಿ.ಎ. | ಇತಿಹಾಸ, ಅರ್ಥಶಾಸ್ತ್ರ, ರಾಜ್ಯಶಾಸ್ತ್ರ | 150(ಒಂದು ನೂರ ಐವತ್ತು) |
| 2 | ಬಿ.ಎ. | ಇತಿಹಾಸ, ಅರ್ಥಶಾಸ್ತ್ರ, ಭೂಗೋಳಶಾಸ್ತ್ರ | 150(ಒಂದು ನೂರ ಐವತ್ತು) |

**ಪೂರ್ವಪ್ರಸ್ತಾಪಿತ ಶಾಶ್ವತ ಸಂಯೋಜನೆ ನವೀಕರಣ ಮಂಜೂರಾತಿಯು ಈ ಕೆಳಕಂಡ ಷರತ್ತುಗಳಿಗೊಳಪಟ್ಟಿರುತ್ತದೆ.**

1 ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;

2 ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;

3 ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;

4 ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;

5 ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು

6 ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ;

7 ದಿನಾಂಕ: 13-8-1997 ರಂದು ವಿಶಾಖ V/S ರಾಜಸ್ಥಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;

--3

8 ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಲಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು;

9 ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;

10 ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ;

11 ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ;

12 ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ತಮ್ಮ ನಂಬುಗೆಯ

(ಮಹೇಶ ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ(ವಿಶ್ವವಿದ್ಯಾಲಯಗಳು-2)

15/10/2019

ಪ್ರತಿ:

1. ಕಾಲೇಜು ಶಿಕ್ಷಣ ಆಯುಕ್ತರು/ನಿರ್ದೇಶಕರು, ಬೆಂಗಳೂರು-560 001

2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು

3. ಪ್ರಾಂಶುಪಾಲರು, ಶ್ರೀ ಸಿದ್ದಗಂಗಾ ಪ್ರಥಮ ದರ್ಜೆ ಕಲಾ ಮತ್ತು ವಾಣಿಜ್ಯ ಕಾಲೇಜು, ನೆಲಮಂಗಲ-562 123, ಬೆಂಗಳೂರು ಗ್ರಾಮಾಂತರ ಜಿಲ್ಲೆ